**All India Radio: Bangalore**
**National Bulletin In Kannada**
**07.06.2026 19.35 hrs**

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**07.06.2026 19.35 hrs**

---

ಮುಖ್ಯಾಂಶಗಳು

೧. ನವದೆಹಲಿಯಲ್ಲಿ ಭಾರತ-ಇಂಡೋನೇಷ್ಯಾ ಜಂಟಿ ಆಯೋಗದ ೮ನೇ ಸಭೆ; ದ್ವಿಪಕ್ಷೀಯ ಬಾಂಧವ್ಯದ ಸಮಗ್ರ ಪರಾಮರ್ಶೆ

೨. ಕೇಂದ್ರ ಸರ್ಕಾರ ದೇಶವನ್ನು ಕಳೆದ ೧೨ ವರ್ಷಗಳಲ್ಲಿ ಅವಕಾಶ, ನಾವಿನ್ಯತೆ ಮತ್ತು ಆತ್ಮವಿಶ್ವಾಸ ಚಾಲಿತ ರಾಷ್ಟ್ರವಾಗಿ ಕೇಂದ್ರ ಸರ್ಕಾರ ರೂಪಾಂತರಿಸಿದೆ - ಕೇಂದ್ರ ಸಚಿವ ಡಾ.ಜಿತೇಂದ್ರ ಸಿಂಗ್

೩. ರಾಷ್ಟ್ರಪ್ರಶಸ್ತಿ ಪುರಸ್ಕೃತ ಮಲಯಾಳಂ ನಟ ಸಲೀಂ ಕುಮಾರ್ ನಿಧನ; ಪ್ರಧಾನಮಂತ್ರಿ ನರೇಂದ್ರ ಮೋದಿ ಸೇರಿದಂತೆ ಹಲವು ಗಣ್ಯರ ಸಂತಾಪ

೪. ದಾಖಲೆಯ ೬ನೇ ಬಾರಿ ಸ್ಯಾಫ್ ಮಹಿಳಾ ಫುಟ್‌ಬಾಲ್ ಚಾಂಪಿಯನ್‌ಶಿಪ್ ಗೆದ್ದ ಭಾರತ ವನಿತೆಯರ ತಂಡ; ಗಣ್ಯರ ಅಭಿನಂದನೆ

೫. ನವ ಚಂಡೀಗಢದಲ್ಲಿ ಭಾರತ - ಅಫ್ಘಾನಿಸ್ತಾನ ನಡುವಿನ ಏಕೈಕ ಟೆಸ್ಟ್ ಕ್ರಿಕೆಟ್ ಪಂದ್ಯ: ೫೬೪ ರನ್ ಗಳಿಗೆ ಇನ್ನಿಂಗ್ಸ್ ಡಿಕ್ಲೇರ್ ಮಾಡಿಕೊಂಡ ಭಾರತ

---

ನವದೆಹಲಿಯಲ್ಲಿಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಮತ್ತು ಇಂಡೋನೇಷ್ಯಾ ವಿದೇಶಾಂಗ ಸಚಿವ ಸುಗಿಯೋನೊ ಸಹ-ಅಧ್ಯಕ್ಷತೆಯಲ್ಲಿ ಭಾರತ-ಇಂಡೋನೇಷ್ಯಾ ಜಂಟಿ ಆಯೋಗದ ೮ನೇ ಸಭೆ ನಡೆಯಿತು. ಉಭಯ

ನಾಯಕರು ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯಡಿಯಲ್ಲಿ ದ್ವಿಪಕ್ಷೀಯ ಬಾಂಧವ್ಯದ ಎಲ್ಲಾ ಆಯಾಮಗಳನ್ನು ಪರಾಮರ್ಶಿಸಿದರು.

ರಕ್ಷಣೆ ಮತ್ತು ಭದ್ರತೆ, ಕಡಲ ಸಹಕಾರ, ವ್ಯಾಪಾರ ಮತ್ತು ಹೂಡಿಕೆ, ಔಷಧ, ಆರೋಗ್ಯ ರಕ್ಷಣೆ, ಡಿಜಿಟಲ್ ತಂತ್ರಜ್ಞಾನ, ಇಂಧನ, ಸಂಪರ್ಕ, ಬಾಹ್ಯಾಕಾಶ, ಶಿಕ್ಷಣ, ಸಂಸ್ಕೃತಿ ಮತ್ತು ಜನರ ನಡುವಿನ ಬಾಂಧವ್ಯ ಸೇರಿದಂತೆ ವಿವಿಧ ವಲಯಗಳಲ್ಲಿ ಸಹಕಾರವನ್ನು ಮತ್ತಷ್ಟು ಬಲಪಡಿಸುವ ಮಾರ್ಗಗಳ ಕುರಿತು ಎರಡೂ ದೇಶಗಳ ನಾಯಕರು ಚರ್ಚಿಸಿದರು.

ಇದೇ ವೇಳೆ, ಉಭಯ ನಾಯಕರು ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿದ್ಯಮಾನಗಳ ಕುರಿತು ತಮ್ಮ ದೃಷ್ಟಿಕೋನಗಳನ್ನು ವಿನಿಮಯ ಮಾಡಿಕೊಂಡರು. ಪ್ರಾದೇಶಿಕ ಹಾಗೂ ಬಹುಪಕ್ಷೀಯ ವೇದಿಕೆಗಳಲ್ಲಿ ನಿಕಟ ಸಹಕಾರ ಮತ್ತು ಸಮನ್ವಯ ಹೊಂದುವ ತಮ್ಮ ಬದ್ಧತೆಯನ್ನು ಪುನರುಚ್ಚರಿಸಿದರು.

ಇದಕ್ಕೂ ಮುನ್ನ, ಸಾಮಾಜಿಕ ಮಾಧ್ಯಮ ಪೋಸ್ಟ್ ನಲ್ಲಿ ಡಾ. ಜೈಶಂಕರ್, ಇತ್ತೀಚಿನ ವರ್ಷಗಳಲ್ಲಿ ಭಾರತ ಮತ್ತು ಇಂಡೋನೇಷ್ಯಾ ನಡುವಿನ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯು ಬಲವಾದ ಬೆಳವಣಿಗೆಯನ್ನು ಕಂಡಿದೆ ಎಂದು ತಿಳಿಸಿದ್ದರು.

---

ಭಾರತವನ್ನು ಕಳೆದ ೧೨ ವರ್ಷಗಳಲ್ಲಿ ಅವಕಾಶ, ನಾವಿನ್ಯತೆ ಮತ್ತು ಆತ್ಮವಿಶ್ವಾಸದಿಂದ ಚಾಲಿತವಾದ ರಾಷ್ಟ್ರವಾಗಿ ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ರೂಪಾಂತರಿಸಿದೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ.ಜಿತೇಂದ್ರ ಸಿಂಗ್ ಹೇಳಿದ್ದಾರೆ.

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಆಡಳಿತ ಸುಧಾರಣೆಗಳು ಮತ್ತು ನಾಗರಿಕ ಕೇಂದ್ರಿತ ನೀತಿಗಳು ದೇಶದ ಜನರು ತಮ್ಮ ಭವಿಷ್ಯದ ನಿರೀಕ್ಷೆಗಳನ್ನು ನೋಡುವ ವಿಧಾನವನ್ನು ಮೂಲಭೂತವಾಗಿ ಬದಲಾಯಿಸಿವೆ ಎಂದು ಹೇಳಿದ್ದಾರೆ.

ಪ್ರಸ್ತುತ ಸುಮಾರು ೯ ಶತಕೋಟಿ ಅಮೆರಿಕನ್ ಡಾಲರ್ ಮೌಲ್ಯದ ಭಾರತದ ಬಾಹ್ಯಾಕಾಶ ಆರ್ಥಿಕತೆಯು ಮುಂದಿನ ಏಳರಿಂದ ಎಂಟು ವರ್ಷಗಳಲ್ಲಿ ಸುಮಾರು ೪೫ ಶತಕೋಟಿ ಡಾಲರ್‌ಗಳಿಗೆ ಏರಿಕೆಯಾಗುವ ನಿರೀಕ್ಷೆಯಿದೆ ಎಂದು ಅವರು ತಿಳಿಸಿದ್ದಾರೆ.

೨೦೧೪ ರಲ್ಲಿ ಸುಮಾರು ೪೦೦ ಸ್ಟಾರ್ಟ್‌ಅಪ್‌ಗಳಿದ್ದು, ಪ್ರಸ್ತುತ ೨.೩ ಲಕ್ಷಕ್ಕೂ ಹೆಚ್ಚು ಸ್ಟಾರ್ಟ್‌ಅಪ್ ಪರಿಸರ ವ್ಯವಸ್ಥೆಯನ್ನು ದೇಶ ಹೊಂದಿದೆ. ಇದು ಸುಮಾರು ೨೫ ಲಕ್ಷ ಉದ್ಯೋಗಗಳನ್ನು ಸೃಷ್ಟಿಸಿದೆ ಎಂದು ಸಚಿವರು ಅಂಕಿಅಂಶ ನೀಡಿದ್ದಾರೆ.

ಆರ್ಥಿಕ ಬೆಳವಣಿಗೆ ಮಾತ್ರ ಸರ್ಕಾರದ ದೀರ್ಘಕಾಲೀನ ಗುರಿಯಲ್ಲ. ೨೦೪೭ ರ ವೇಳೆಗೆ ಅಭಿವೃದ್ಧಿ ಹೊಂದಿದ ಭಾರತದ ದೃಷ್ಟಿಕೋನಕ್ಕೆ ಕೊಡುಗೆ ನೀಡುವ ಸಬಲೀಕೃತ ಸಮಾಜವನ್ನು ನಿರ್ಮಿಸುವ ಗುರಿಯನ್ನೂ ಸರ್ಕಾರ ಹೊಂದಿದೆ ಎಂದು ಜಿತೇಂದ್ರ ಸಿಂಗ್ ತಿಳಿಸಿದ್ದಾರೆ.

---

ವಿಶ್ವಸಂಸ್ಥೆಯ ಈ ವರ್ಷದ ಮಿಲಿಟರಿ ಜೆಂಡರ್ ಅಡ್ವೊಕೇಟ್ ಪ್ರಶಸ್ತಿಗೆ ಭಾಜನರಾಗಿರುವ ಮೇಜರ್ ಅಭಿಲಾಷಾ ಬರಾಕ್ ಅವರನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಅಭಿನಂದಿಸಿದ್ದಾರೆ.

ಈ ಪ್ರಶಸ್ತಿ ಬರಾಕ್ ಅವರ ಅಪಾರ ಸೇವೆಗೆ ಮತ್ತು ವಿಶ್ವಸಂಸ್ಥೆಯ ಶಾಂತಿ ನಿರ್ವಹಣೆ ಪ್ರಯತ್ನಗಳಿಗೆ ಭಾರತದ ನಿರಂತರ ಕೊಡುಗೆಗೆ ಸಂದ ಗೌರವ ಎಂದು ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಮಂತ್ರಿ ಉಲ್ಲೇಖಿಸಿದ್ದಾರೆ.

ದೇಶ ಮತ್ತು ಮಾನವೀಯತೆಗೆ ಸೇವೆ ಸಲ್ಲಿಸಲು ಉತ್ಸುಕರಾದ ಅಸಂಖ್ಯ ಯುವಜನತೆಗೆ ಅದರಲ್ಲೂ ವಿಶೇಷವಾಗಿ ಯುವತಿಯರಿಗೆ ಬರಾಕ್ ಅವರು ಪ್ರೇರಣೆಯಾಗಿದ್ದಾರೆ ಎಂದು ಪ್ರಧಾನಮಂತ್ರಿ ಶ್ಲಾಘಿಸಿದ್ದಾರೆ.

---

ಗ್ರಾಹಕ ವ್ಯವಹಾರಗಳ ಇಲಾಖೆಯ 'ಇ-ಜಾಗೃತಿ' ವೇದಿಕೆಗೆ ಡಿಜಿಟಲ್ ರೂಪಾಂತರಕ್ಕಾಗಿ ತಂತ್ರಜ್ಞಾನದ ಬಳಕೆಯ ಮೂಲಕ ಸರ್ಕಾರಿ ಪ್ರಕ್ರಿಯೆ ಮರು-ಎಂಜಿನಿಯರಿಂಗ್ ನ ವರ್ಗ-೧ ರಡಿಯಲ್ಲಿ ಇ-ಆಡಳಿತದ ರಾಷ್ಟ್ರೀಯ ಪ್ರಶಸ್ತಿ ೨೦೨೬' ರಲ್ಲಿ ಬೆಳ್ಳಿ ಪ್ರಶಸ್ತಿ ಲಭಿಸಿದೆ.

ಆಡಳಿತ ಸುಧಾರಣೆ ಮತ್ತು ಸಾರ್ವಜನಿಕ ಕುಂದುಕೊರತೆಗಳ ಇಲಾಖೆಯು ಈ ಪ್ರಶಸ್ತಿ ಪ್ರದಾನ ಮಾಡಿದೆ. ತಂತ್ರಜ್ಞಾನ ಆಧಾರಿತ ಮತ್ತು ನಾಗರಿಕ ಕೇಂದ್ರಿತ ಸೇವಾ ವಿತರಣೆಯ ಮೂಲಕ ಗ್ರಾಹಕರ ಕುಂದುಕೊರತೆಗಳ ನಿವಾರಣೆಯನ್ನು ಪರಿಹರಿಸುವಲ್ಲಿ ಇ-ಜಾಗೃತಿಯ ಪಾತ್ರವನ್ನು ಗುರುತಿಸಲಾಗಿದೆ ಎಂದು ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವಾಲಯ ತಿಳಿಸಿದೆ.

ಜನವರಿ ೧ ರಂದು ಪ್ರಾರಂಭಿಸಲಾದ ಇ-ಜಾಗೃತಿಯು, ಹಿಂದಿನ ನಾಲ್ಕು ಅಪ್ಲಿಕೇಶನ್‌ಗಳಾದ ಒಸಿಎಂಎಸ್, ಇ-ದಾಖಿಲ್, ಎನ್‌ಸಿಡಿಆರ್‌ಸಿ ಸಿಎಂಎಸ್ ಮತ್ತು ಕಾನ್‌ಫೋನೆಟ್ ಅನ್ನು ಎಐ-ಸಕ್ರಿಯಗೊಳಿಸಿದ, ಕಾಗದರಹಿತ ಏಕ ವೇದಿಕೆಯಾಗಿ ಸಂಯೋಜಿಸಿದೆ. ಈ ವೇದಿಕೆ ಆರಂಭವಾದಾಗಿನಿಂದ ೨.೨೯ ಲಕ್ಷಕ್ಕೂ ಹೆಚ್ಚು ಗ್ರಾಹಕ ಪ್ರಕರಣಗಳು ದಾಖಲಾಗಿದ್ದು, ೨.೦೭ ಲಕ್ಷಕ್ಕೂ ಹೆಚ್ಚು ಪ್ರಕರಣಗಳ ವಿಲೇವಾರಿ ಮಾಡಲಾಗಿದ್ದು, ಶೇಕಡ ೯೦.೭೫ ರಷ್ಟು ಪ್ರಕರಣ ವಿಲೇವಾರಿ ಸಾಧ್ಯವಾಗಿದೆ.

---

ಮಲಯಾಳಂ ಸಿನಿಮಾ ರಂಗದ ದಿಗ್ಗಜ ನಟ, ನಿರ್ದೇಶಕ ಮತ್ತು ಬರಹಗಾರ ಸಲೀಂ ಕುಮಾರ್ ನಿನ್ನೆ ವಿಧಿವಶರಾದರು. ಅವರಿಗೆ ೫೬ ವರ್ಷ ವಯಸ್ಸಾಗಿತ್ತು. ಅವರು ಕೆಲ ದಿನಗಳಿಂದ ಅನಾರೋಗ್ಯದಿಂದ ಬಳಲುತ್ತಿದ್ದರು.

ಅಧಿಕೃತ ಗೌರವಗಳೊಂದಿಗೆ ಅವರ ನಿವಾಸದಲ್ಲಿ ಅಂತ್ಯಕ್ರಿಯೆ ನಡೆಸಲಾಯಿತು. ಅವರ ಇಚ್ಛೆಯಂತೆ ಧಾರ್ಮಿಕ ವಿಧಿವಿಧಾನಗಳಿಲ್ಲದೇ ಅಂತ್ಯಕ್ರಿಯೆ ನೆರವೇರಿಸಲಾಯಿತು.

೧೯೯೦ರ ದಶಕದಲ್ಲಿ ಹಾಸ್ಯ ಪ್ರದರ್ಶನಗಳ ಮೂಲಕ ಗುರುತಿಸಿಕೊಂಡಿದ್ದ ಅವರು, ನಂತರ ಚಿತ್ರರಂಗಕ್ಕೆ ಪದಾರ್ಪಣೆ ಮಾಡಿದ್ದು, ೨೦೧೦ರಲ್ಲಿ ಬಿಡುಗಡೆಯಾದ ಆಡಮಿಂಡೆ ಮಕನ್ ಅಬು ಚಿತ್ರದಲ್ಲಿನ ಅತ್ಯುತ್ತಮ ನಟನೆಗಾಗಿ ರಾಷ್ಟ್ರಪ್ರಶಸ್ತಿಗೆ ಭಾಜನರಾದರು. ಅವರು ನಿರ್ದೇಶಿಸಿದ ಕರುಥಾ ಜೂಥನ್ ಚಿತ್ರಕ್ಕೆ ೨೦೧೭ರ ಕೇರಳ ರಾಜ್ಯ ಚಲನಚಿತ್ರ ಪ್ರಶಸ್ತಿ ಲಭಿಸಿದೆ.

ಸಲೀಮ್ ಅವರ ನಿಧನಕ್ಕೆ ಪ್ರಧಾನಮಂತ್ರಿ ನರೇಂದ್ರ ಮೋದಿ, ಕೇರಳ ಮುಖ್ಯಮಂತ್ರಿ ವಿ.ಡಿ.ಸತೀಸನ್, ನಟ ಮಮ್ಮುಟಿ ಸೇರಿದಂತೆ ಚಿತ್ರರಂಗದ ಗಣ್ಯರು ಸಂತಾಪ ಸೂಚಿಸಿದ್ದಾರೆ.

ಸಲೀಂ ಅವರು ತಮ್ಮ ವೃತ್ತಿಜೀವನದುದ್ದಕ್ಕೂ ಹಲವು ವಿಭಿನ್ನ ಪಾತ್ರಗಳಲ್ಲಿ ನಟಿಸಿ ತಮ್ಮ ನಟನೆಯ ಮೂಲಕ ಅಜರಾಮರರಾಗಿದ್ದಾರೆ ಎಂದು ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಮಂತ್ರಿ ಉಲ್ಲೇಖಿಸಿದ್ದಾರೆ.

ಮಲಯಾಳಂ ಚಿತ್ರರಂಗ ದಿಗ್ಗಜ ನಟನನ್ನು ಕಳೆದುಕೊಂಡಿದೆ ಎಂದು ಮುಖ್ಯಮಂತ್ರಿ ವಿ.ಡಿ. ಸತೀಸನ್ ಕಂಬನಿ ಮಿಡಿದಿದ್ದಾರೆ.

---

ರಜೌರಿ ಜಿಲ್ಲೆಯಲ್ಲಿ ಕಾರ್ಯಾಚರಣೆಯ ಕರ್ತವ್ಯದ ವೇಳೆ ಪ್ರಾಣ ಕಳೆದುಕೊಂಡ ಲೆಫ್ಟಿನೆಂಟ್ ಬೀರೇಶ್ವರ್ ಗೋಸ್ವಾಮಿ ಅವರಿಗೆ ಜಮ್ಮು ಮತ್ತು ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಇಂದು ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಿದ್ದಾರೆ.

ಜಮ್ಮುವಿನ ವಾಯುಪಡೆ ನಿಲ್ದಾಣದಲ್ಲಿ ಪೂರ್ಣ ಮಿಲಿಟರಿ ಗೌರವಗಳೊಂದಿಗೆ ಪುಷ್ಪಗುಚ್ಛ ಇರಿಸಿ, ಲೆಫ್ಟಿನೆಂಟ್ ಗವರ್ನರ್ ಸಿನ್ಹಾ, ಸೇನಾಪಡೆಯ ಹಿರಿಯ ಅಧಿಕಾರಿಗಳು, ಪೊಲೀಸ್ ಮತ್ತು ನಾಗರಿಕ ಅಧಿಕಾರಿಗಳು ಅಂತಿಮ ನಮನ ಸಲ್ಲಿಸಿದರು. ಬಳಿಕ ಅವರ ಪಾರ್ಥಿವ ಶರೀರವನ್ನು ಅಂತಿಮ ವಿಧಿವಿಧಾನಗಳಿಗಾಗಿ

ಉತ್ತರಾಖಂಡದ ಅಲ್ಮೋರಾ ಜಿಲ್ಲೆಯಲ್ಲಿರುವ ಅವರ ಸ್ವಂತ ಗ್ರಾಮಕ್ಕೆ ಕೊಂಡೊಯ್ಯಲಾಯಿತು.

ನಿನ್ನೆ ಸಂಜೆ ಗಂಭೀರ್ ಮುಘ್ಲಾನ್ ಬೆಲ್ಟ್‌ನ ದೊರಿಮಾಲ್ ಪ್ರದೇಶದಲ್ಲಿ ಭಯೋತ್ಪಾದನಾ ನಿರೋಧಿ ಕಾರ್ಯಾಚರಣೆಯ ಸಂದರ್ಭದಲ್ಲಿ ಆಳವಾದ ಕಂದಕಕ್ಕೆ ಜಾರಿ ಬಿದ್ದಿದ್ದರಿಂದ ಲೆಫ್ಟಿನೆಂಟ್ ಗೋಸ್ವಾಮಿ ಅವರು ಸಾವನ್ನಪ್ಪಿದ್ದರು.

---

ದಕ್ಷಿಣ ಏಷ್ಯಾ ಫುಟ್‌ಬಾಲ್ ಫೆಡರೇಶನ್ ಎಸ್ ಎ ಎಫ್ ಎಫ್ ಚಾಂಪಿಯನ್‌ಶಿಪ್ ಗೆದ್ದು, ದಾಖಲೆಯ ಆರನೇ ಬಾರಿಗೆ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡ ಭಾರತೀಯ ಮಹಿಳಾ ಫುಟ್‌ಬಾಲ್ ತಂಡವನ್ನು ಗಣ್ಯರು ಅಭಿನಂದಿಸಿದ್ದಾರೆ.

ಗೋವಾದ ಮಡಗಾಂವ್‌ನಲ್ಲಿ ನಿನ್ನೆ ನಡೆದ ರೋಚಕ ಫೈನಲ್ ಪಂದ್ಯದಲ್ಲಿ ಭಾರತ ತಂಡವು ಹಾಲಿ ಚಾಂಪಿಯನ್ ಬಾಂಗ್ಲಾದೇಶವನ್ನು ೩-೧ ಗೋಲುಗಳ ಅಂತರದಿಂದ ಸೋಲಿಸಿ, ದಾಖಲೆಯ ಆರನೇ ಬಾರಿಗೆ ಪ್ರಶಸ್ತಿಯನ್ನು ತನ್ನದಾಗಿಸಿಕೊಂಡಿತು.

ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ. ಪಿ. ರಾಧಾಕೃಷ್ಣನ್ ಮತ್ತು ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವೀಯ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸೇರಿದಂತೆ ಗಣ್ಯರು ತಂಡವನ್ನು ಅಭಿನಂದಿಸಿ ಮುಂದಿನ ಪ್ರಯತ್ನಗಳಿಗೆ ಶುಭ ಹಾರೈಸಿದ್ದಾರೆ.

---

ನವ ಚಂಡೀಗಢದಲ್ಲಿ ನಡೆಯುತ್ತಿರುವ ಭಾರತ - ಅಫ್ಘಾನಿಸ್ತಾನ ನಡುವಿನ ಏಕೈಕ ಟೆಸ್ಟ್ ಕ್ರಿಕೆಟ್ ಪಂದ್ಯದ ಎರಡನೇ ದಿನದಾಟದಂತ್ಯಕ್ಕೆ ಅಫ್ಘಾನಿಸ್ತಾನ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ೫ ವಿಕೆಟ್‌ಗಳಿಗೆ ೧೧೩ ರನ್ ಗಳಿಸಿದೆ.

ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡ ಭಾರತ ಇಂದು ಎರಡನೇ ದಿನದಾಟ ಮುಂದುವರಿಸಿ ೮ ವಿಕೆಟ್ ಗಳಿಗೆ ೫೬೪ ರನ್ ಗಳಿಗೆ ಮೊದಲ ಇನ್ನಿಂಗ್ಸ್ ಡಿಕ್ಲೇರ್ ಮಾಡಿಕೊಂಡಿತು.

---

ಮಂಗೋಲಿಯಾದ ಉಲಾನ್‌ಬಾತರ್‌ನಲ್ಲಿ ನಡೆಯುತ್ತಿರುವ 'ಉಲಾನ್‌ಬಾತರ್ ಮುಕ್ತ' ಕುಸ್ತಿ ಪಂದ್ಯಾವಳಿಯಲ್ಲಿ ಭಾರತೀಯ ಕುಸ್ತಿಪಟುಗಳು ಉತ್ತಮ ಪ್ರದರ್ಶನವನ್ನು ಮುಂದುವರಿಸಿ, ಇಂದು ಪುರುಷರ ಫ್ರೀಸ್ಟೈಲ್ ವಿಭಾಗದಲ್ಲಿ ಎರಡು ಚಿನ್ನದ ಪದಕ ಗೆದ್ದಿದ್ದಾರೆ.

೬೧ ಕೆಜಿ ವಿಭಾಗದ ಫೈನಲ್ ಪಂದ್ಯದಲ್ಲಿ ದೀಪಕ್ ಅವರು ಕಝಾಕಿಸ್ತಾನದ ಅಸಿಲ್ ಐತಾಕಿನ್ ಅವರನ್ನು ೬-೦ ಅಂತರದಿಂದ ಮಣಿಸಿ ಚಿನ್ನದ ಪದಕ ಜಯಿಸಿದ್ದಾರೆ.

೧೨೫ ಕೆಜಿ ವಿಭಾಗದ ಫೈನಲ್‌ನಲ್ಲಿ ದಿನೇಶ್ ಅವರು ಕಝಾಕಿಸ್ತಾನದ ಯೆದಿಗೆ ಕಾಸಿಂಬೆಕ್ ಅವರನ್ನು ೨-೦ ಅಂತರದಿಂದ ಮಣಿಸಿ ಬಂಗಾರದ ಪದಕಕ್ಕೆ ಭಾಜನರಾಗಿದ್ದಾರೆ.

ಮತ್ತೊಂದೆಡೆ, ೬೫ ಕೆಜಿ ವಿಭಾಗದಲ್ಲಿ ಮೋಹಿತ್ ಕುಮಾರ್ ಅವರು ಕಝಾಕಿಸ್ತಾನದ ಒಸ್ಸಿಮ್‌ಝಾನ್ ದಸ್ತಾನ್‌ಬೆಕ್ ವಿರುದ್ಧ ೧೭-೬ ರ ಜಯ ಸಾಧಿಸಿ ಮೂಲಕ ಕಂಚಿನ ಪದಕವನ್ನು ಖಚಿತಪಡಿಸಿಕೊಂಡಿದ್ದಾರೆ.

ಹಾಗೆಯೇ ೯೭ ಕೆಜಿ ವಿಭಾಗದಲ್ಲಿ ವಿಕ್ಕಿ ಅವರು ಮಂಗೋಲಿಯಾದ ಗಂಖುಯಾಗ್ ಗನ್‌ಬಾತರ್ ಅವರನ್ನು ೪-೦ ಅಂತರದಿಂದ ಸೋಲಿಸಿ ಕಂಚಿನ ಪದಕ ಗೆದ್ದಿದ್ದಾರೆ.

__________ ಮುಕ್ತಾಯ __________